RNU AIR DHARWAD

SEPTEMBER 03, 2025

# AKASHAVANI - DHARWAD

# PRADESH SAMACHARA (KANNADA) 12 PM

<><><>

**ಕೇಂದ್ರ ಸರ್ಕಾರವು ಕ್ರೀಡಾ ಕ್ಷೇತ್ರಕ್ಕೆ** ಹೆಚ್ಚಿನ ಒತ್ತು ನೀಡುತ್ತಿದ್ದು, 2030 ರಲ್ಲಿ ಕಾಮನವೆಲ್ತ್ ಕ್ರೀಡಾಕೂಟ ಹಾಗೂ 2031 ರಲ್ಲಿ ಒಲಿಂಪಿಕ್ ಕ್ರೀಡಾಕೂಟವನ್ನು ಆಯೋಜಿಸುವ ಗುರಿ ಹೊಂದಿದೆ. ದೇಶದ ಪ್ರತಿಭಾವಂತ ಕ್ರೀಡಾಪಟುಗಳನ್ನು ಗುರುತಿಸಿ, ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಲೋಕಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ 'ಸಂಸತ್ ಖೇಲ್ ಮಹೋತ್ಸವ' ಆಯೋಜಿಸಲಾಗುತ್ತಿದೆ ಎಂದು ಸಂಸದ ಬಿ.ವೈ ರಾಘವೇಂದ್ರ ಹೇಳಿದರು. ಉಡುಪಿ ಜಿಲ್ಲೆ, ಬೈಂದೂರಿನಲ್ಲಿ ಸಂಸತ್ ಖೇಲ್ ಮಹೋತ್ಸವದ ಭಿತ್ತಿ ಪತ್ರ ಬಿಡುಗಡೆಗೊಳಿಸಿ ಅವರು ಮಾತನಾಡಿದರು. ಈ ತಿಂಗಳ 20 ರ ಒಳಗೆ ಸಾಂಪ್ರದಾಯಿಕ ಹಾಗೂ ಒಳಾಂಗಣ ಕ್ರೀಡಾ ವಿಭಾಗಗಳಲ್ಲಿ ಆಸಕ್ತ ವಿದ್ಯಾರ್ಥಿಗಳು ಹೆಸರು ನೋಂದಣಿ ಮಾಡಿಕೊಳ್ಳಬಹುದು, ಆಯ್ಕೆಯಾದವರಿಗೆ ಕ್ರೀಡಾ ವಿದ್ಯಾರ್ಥಿ ವೇತನ, ತರಬೇತಿ, ಕ್ರೀಡಾ ಸಲಕರಣೆಗಳನ್ನು ಒದಗಿಸಲಾಗುವುದು ಎಂದರು.

<><><>

**ವಿದ್ಯಾರ್ಥಿಗಳು ಕ್ರೀಡಾ ಚಟುವಟಿಕೆಗಳಲ್ಲಿ** ಭಾಗವಹಿಸುವುದರಿಂದ ದೈಹಿಕ ಹಾಗೂ ಮಾನಸಿಕ ಸುದೃಢತೆ ಸಾಧ್ಯ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಡಾಕ್ಟರ್ ವೈ.ನವೀನ್ ಭಟ್ ಹೇಳಿದರು. ಜಿಲ್ಲಾ ಪದವಿಪೂರ್ವ ಶಿಕ್ಷಣ ಇಲಾಖೆ, ಚಿಂತಾಮಣಿ ನಗರದ ಕ್ರೀಡಾಂಗಣದಲ್ಲಿ ಆಯೋಜಿಸಲಾದ, ಪದವಿಪೂರ್ವ ಕಾಲೇಜು ವಿದ್ಯಾರ್ಥಿಗಳ, ಎರಡು ದಿನಗಳ ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

<><><>

**ಶಿವಮೊಗ್ಗ ಜಿಲ್ಲೆಯಲ್ಲಿ ತೆಂಗು ಅಭಿವೃದ್ಧಿ** ಮಂಡಳಿ ಶಾಖೆಯನ್ನು ಆರಂಭಿಸಲು ಉದ್ದೇಶಿಸಲಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಖಾತೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಳೆಯಿಂದಾಗಿ ಹಾನಿಗೀಡಾದ ಬೆಳೆಗಳ ಬಗ್ಗೆ ಮಾಹಿತಿ ಕ್ರೋಢಿಕರಿಸಿ, ವರದಿ ನೀಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

<><><>

**ಧಾರವಾಡ ಜಿಲ್ಲೆ, ಕುಂದಗೋಳ ತಾಲೂಕಿನಲ್ಲಿ** ಸತತ ಮಳೆ ಹಿನ್ನೆಲೆ, ಹೆಸರು, ಉದ್ದು ಸೇರಿದಂತೆ ವಿವಿಧ ಬೆಳೆಗಳು ನಾಶವಾಗಿವೆ. ವಿಪತ್ತು ನಿರ್ವಹಣಾ ಪ್ರಾಧಿಕಾರದ ರಾಜ್ಯಮಟ್ಟದ ಅಧಿಕಾರಿಗಳ ತಂಡ ತಾಲೂಕಿನ ವಿವಿಧ ರೈತರ ಜಮೀನುಗಳಿಗೆ ತೆರಳಿ ಪರಿಶೀಲನೆ ನಡೆಸಿತು. ಅಧಿಕಾರಿ ಮಂಜುಳಮ್ಮ ನೇತೃತ್ವದ ತಂಡ ಕುಂದಗೋಳ, ಶಿರೂರ, ಬಸಾಪೂರ, ಮುಳ್ಳೊಳ್ಳಿ ಸೇರಿದಂತೆ ವಿವಿಧ ಗ್ರಾಮಗಳಿಗೆ ತೆರಳಿ ರೈತರೊಂದಿಗೆ ಸಂವಾದ ನಡೆಸಿತು.

<><><>

**ಬೀದರ್ ಜಿಲ್ಲೆ, ಭಾಲ್ಕಿ ತಾಲೂಕಿನ** ವಿವಿಧೆಡೆ ಮಳೆಯಿಂದಾಗಿ, ಮನೆ ಹಾನಿ ಗೊಳಗಾದ 36 ಸಂತ್ರಸ್ತ ಕುಟುಂಬಗಳಿಗೆ, ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಅವರು ತಲಾ 30 ಸಾವಿರ ರೂಪಾಯಿಯಂತೆ, ಒಟ್ಟು 11 ಲಕ್ಷ ರೂಪಾಯಿ ಪರಿಹಾರದ ಆದೇಶ ಪತ್ರಗಳನ್ನು ವಿತರಿಸಿದರು. ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಭಾಲ್ಕಿ ಸೇರಿದಂತೆ, ಜಿಲ್ಲೆಯಲ್ಲಿ ಅತಿವೃಷ್ಠಿಯಿಂದ ಹಾನಿಗೀಡಾದವರಿಗೆ ತ್ವರಿತವಾಗಿ ಪರಿಹಾರ ವಿತರಣೆ ನಡೆಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

<><><>

**ಕೊಡಗು ಜಿಲ್ಲೆಯಾದ್ಯಂತ** ಇಂದು, 'ಕೈಲ್ ಮುಹೂರ್ತ' ಹಬ್ಬವನ್ನು ಸಂಭ್ರಮದೊಂದಿಗೆ ಆಚರಿಸಲಾಗುತ್ತಿದೆ. ರೈತಾಪಿ ವರ್ಗ ಕೃಷಿ ಕಾರ್ಯ ಮುಕ್ತಾಯಗೊಂಡ ಸಂಕೇತವಾಗಿ, ಕೃಷಿ ಉಪ ಕರಣಗಳನ್ನು ಶುಚಿಗೊಳಿಸಿ, ಕೃಷಿ ಬಳಕೆಯ ನೇಗಿಲು, ಪಿಕಾಸಿ, ಕತ್ತಿ ಹಾಗೂ ಕೋವಿಗೆ ಸಾಂಪ್ರದಾಯಿಕ ಪೂಜೆ ಸಲ್ಲಿಸುವುದು ವಾಡಿಕೆಯಾಗಿದೆ.

<><><>

**ಭಾರತೀಯ ಬಾಹ್ಯಾಕಾಶ ಸಂಶೋಧನಾ** ಸಂಸ್ಥೆಯಲ್ಲಿ– ಇಸ್ರೋ ಬೆಂಗಳೂರು ಆವರಣದಲ್ಲಿ, ಆಗಸ್ಟ್ 3 ರಂದು ಜರುಗಿದ, ಇಸ್ರೋ ರೋಬೊಟಿಕ್ಸ್ ಚಾಲೆಂಜ್ ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ, ಧಾರವಾಡದ ಭಾರತೀಯ ಮಾಹಿತಿ ತಂತ್ರಜ್ಞಾನ ಸಂಸ್ಥೆ–ಟ್ರಿಪಲ್ ಐಟಿ ವಿದ್ಯಾರ್ಥಿಗಳ ತಂಡ ತೃತೀಯ ಸ್ಥಾನ ಗಳಿಸಿದೆ.

<><><>

**ಕಲಬುರಗಿ ಜಿಲ್ಲೆಯಲ್ಲಿ, ಅಂಧ ವಿದ್ಯಾರ್ಥಿಗಳ** ಶಿಕ್ಷಣಕ್ಕೆ ಪೂರಕವಾಗುವಂತೆ, ಉಚಿತ ಲ್ಯಾಪ ಟಾಪ್, ಬ್ರೈಲ್ ಕಿಟ್, ಮೊಬೈಲ್, ಕ್ಯಾಲ್ಕುಲೇಟರ್ ಸೇರಿದಂತೆ, ಅಂಧ ವಿದ್ಯಾರ್ಥಿಗಳ ಉನ್ನತ ಶಿಕ್ಷಣಕ್ಕೆ ಅಗತ್ಯವಿರುವ ಪರಿಕರಗಳನ್ನು ವಿತರಿಸಲಾಗುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಜಿಲ್ಲಾ ಉಸ್ತುವಾರಿ ಖಾತೆ ಸಚಿವ ಪ್ರಿಯಾಂಕ ಖರ್ಗೆ ಅವರು ತಮ್ಮ ಎಕ್ಸ್ ಖಾತೆಯಲ್ಲಿ ತಿಳಿಸಿದ್ದಾರೆ.

<><><>

**ಧಾರವಾಡ ಹಾಗೂ ಮೈಸೂರು ಜಿಲ್ಲೆಗಳಲ್ಲಿ** ಸ್ಥಾಪಿಸಲು ಉದ್ದೇಶಿಸಿರುವ ಕೌಶಲ ತರಬೇತಿ ಸಂಸ್ಥೆಗಳಿಗೆ ಸಂಬಂಧಿಸಿದಂತೆ, ಬೆಂಗಳೂರು ವಿಕಾಸಸೌಧದಲ್ಲಿ ಕಾರ್ಮಿಕ ಖಾತೆ ಸಚಿವ ಸಂತೋಷ್ ಲಾಡ್ ಅವರ ನೇತೃತ್ವದಲ್ಲಿ ವಿವಿಧ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಸಮಾಲೋಚನೆ ನಡೆಸಲಾಯಿತು.

<><><>

**ಕೇಂದ್ರ ಹಣಕಾಸು ಸೇವೆಗಳ ಇಲಾಖೆ ವತಿಯಿಂದ,** ಹಣಕಾಸು ಸೇರ್ಪಡೆ ಪರಿಪೂರ್ಣತೆ ಅಭಿಯಾನದ ಅಂಗವಾಗಿ, ಬೆಂಗಳೂರು ದಕ್ಷಿಣ ಜಿಲ್ಲೆ, ಹಂಚಿಕುಪ್ಪೆ ಗ್ರಾಮ ಪಂಚಾಯಿತಿಯಲ್ಲಿ, ಜನಸುರಕ್ಷಾ ಶಿಬಿರ ಆಯೋಜಿಸಿ, ಕೇಂದ್ರ ಪುರಸ್ಕೃತ ಯೋಜನೆಗಳಡಿ ನೋಂದಣಿ ಮಾಡಲಾಯಿತು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>